# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬಿಬಿಎಂಪಿ/ವಾ.22/ಜೆ.ಸಿ ಉ/ಪಿಆರ್/36/2020–21

ಸಹಾಯಕ ಅಭಿಯಂತರರ ಕಛೇರಿ
ಜೆ.ಸಿ ನಗರ ಉಪ–ವಿಭಾಗ, ಪೂರ್ವ ವಿಭಾಗ
ವಿ. ನಾಗೇನಹಳ್ಳಿ, ವಾರ್ಡ್ ನಂ;22

ಬೆಂಗಳೂರು – 560032.
ದಿನಾಂಕ:27–10–2021

## ದಿನಾಂಕ; 27–10–2021 ರಂದು ವಾರ್ಡ್ ಸಮಿತಿ ಸಭೆಯ ನಡಾವಳಿಗಳು;–

- ಶ್ರೀ. ಗುರುಸಿದ್ದಪ್ಪ .ಜಿ ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಸಮಿತಿ ಕಾರ್ಯದರ್ಶಿ
- ಶ್ರೀಮತಿ. ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ಮಧು, ಕಿರಿಯ ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ
- ಶ್ರೀ. ವಿನೋಡ್ ಎನ್.ಆರ್, ಕಂದಾಯ ಪರಿವೀಕ್ಷಕರು, ಕಂದಾಯ ಇಲಾಖೆ
- ಶ್ರೀಮತಿ ಉಷಾರಾಣಿ, ಕಲ್ಯಾಣ ಇಲಾಖೆ ಸದಸ್ಯರು
- ಶ್ರೀ. ಉದಯ್ ಚಂದನ್, ಕೆ.ಆರ್,ಡ್ಲ್ಯೂ,ಎ ಸದಸ್ಯರು
- ಶ್ರೀ. ಕಲೀಲ್ ರೆಹಮಾನ್ , ಕೆ.ಆರ್,ಡ್ಲ್ಯೂ,ಎ ಸದಸ್ಯರು
- ಶ್ರೀ. ಡೇವಿಡ್ ಫರ್ನಾಂಡಿಸ್, ವಸತಿ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು
- ಶ್ರೀ. ಸುನೀಲ್, ನಾಗರೀಕರು ಗುಡ್ಡದಹಳ್ಳಿ
- ಶ್ರೀ. ಕೆ. ಖಮಾನ್, ನಾಗರೀಕರು

ವಾರ್ಡ್ ಸಮಿತಿ ಸಭೆಯನ್ನು ವಾರ್ಡ್ ಸಮತಿ ಕಾರ್ಯದರ್ಶಿಗಳಾದ ಶ್ರೀ. ಗುರುಸಿದ್ದಪ್ಪ .ಜಿ ವಾರ್ಡ್ ಸಮಿತಿ ಅಧ್ಯಕ್ಷರು, ಸಮಿತಿಯ ಸದಸ್ಯರುಗಳು ಹಾಗೂ ವಾರ್ಡ್ ಸಂಖ್ಯೆ; 22ರ ನಾಗರೀಕರು ಹಾಗೂ ಎಲ್ಲ ವೃಂದದ ಅಧಿಕಾರಿಗಳನ್ನು ಸ್ವಾಗತಿಸುತ್ತಾ, ಸಭೆಯನ್ನು ಪ್ರಾರಂಭಿಸಿದರು.

ಶ್ರೀ. ಗುರುಸಿದ್ದಪ್ಪ. ಜಿ ವಾರ್ಡ್ ಕಾರ್ಯದರ್ಶಿಗಳು ಸಭೆಗೆ ಹಾಜರಿದ್ದ ಅಧಿಕಾರಿಗಳ ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸ್ವಾಗತವನ್ನು ಕೋರಿದರು, ಹಾಗೂ ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು, ಹಾಗೂ ದಿನಾಂಕ; 18-09-2021 ರಂದು ನಡೆದ ವಾರ್ಡ್ ಸಮಿತಿಯ ನಡವಳಿಗಳನ್ನು ಪುನರಾವಲೋಕನ ಮಾಡಲಾಯಿತು. ಹಿಂದಿನ ಸಭೆಯಲ್ಲಿ ತೆಗೆದುಕೊಂಡಿದ್ದ ತೀರ್ಮಾನಗಳನ್ನು ಕುರಿತು ಈ ದಿನಾಂಕದವರೆಗೆ ನಿರ್ವಹಿಸಿದ ಕೆಲಸಗಳ ಬಗ್ಗೆ ಸದಸ್ಯರುಗಳಿಗೆ ತಿಳಿಸಲಾಯಿತು.

- ಶ್ರೀ ಗುರುಸಿದ್ದಪ್ಪ, ಸಹಾಯಕ ಅಭಿಯಂತರರು ಮಾತನಾಡುತ್ತಾ, ವಾರ್ಡ್‌ನ ವ್ಯಾಪ್ತಿಯಲ್ಲಿ ಬರುವ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಲ್ಲಿ ಅಲ್ಲಲ್ಲಿ ಬಿದ್ದಿರುವ ಗುಂಡಿಗಳನ್ನು ವೆಟ್ ಮಿಕ್ಸ್ ಮತ್ತು ಡಾಂಬರಿನಿಂದ ಗುಂಡಿಗಳನ್ನು ಮುಚ್ಚುವ ಕಾಮಗಾರಿ ಪ್ರಗತಿಯಲ್ಲಿರುವ ಬಗ್ಗೆ ಸಭೆಗೆ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಲಾಯಿತು.
- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್-19 +ve ಕೇಸ್‌ಗಳು ಹೆಚ್ಚಾಗುತ್ತಿದ್ದು, ವಾರ್ಡಿನಲ್ಲಿ ಈಗಾಗಲೇ ಕೋವಿಡ್ ವ್ಯಾಷಿನೇಶನ್ ಅನ್ನು 45 ವರ್ಷ ಮೇಲ್ಪಟ್ಟವರಿಗೆ ಹಾಗೂ 18 ವರ್ಷ ಮೇಲ್ಪಟ್ಟ ಜನರಿಗೆ ಮೊದಲ ಹಾಗೂ ಎರಡನೇ ಡೋಸ್ ವ್ಯಾಷಿನೇಶನ್ ನೀಡುತ್ತಿರುವ ಬಗ್ಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯ ಮುಖ್ಯ ಹಾಗೂ ಅಡ್ಡರಸ್ತೆಗಳಲ್ಲಿ ಘನತ್ಯಾಜ್ಯ ಇಲಾಖೆಯವರಿಂದ ಕಸ ವಿಲೇವಾರಿ ಮಾಡುವ ಬಗ್ಗೆ ಹಾಗೂ ಅಲ್ಲಲ್ಲಿ ಬ್ಲಾಕ್ ಸ್ಪಾಟ್‌ಗಳಲ್ಲಿ ಕಸ ವಿಂಗಡಣೆ ಮಾಡಿ ಸರಿಯಾದ ರೀತಿಯಲ್ಲಿ ಕಸ ವಿಲೇವಾರಿ ಮಾಡುವ ಬಗ್ಗೆ ಚರ್ಚಿಸಲಾಯಿತ್ತು.
- ಸಭೆಗೆ ಹಾಜರಿದ್ದ ಶ್ರೀ ಮಧು ಆರೋಗ್ಯ ಪರಿವೀಕ್ಷಕರು, ಘನತ್ಯಾಜ್ಯ ಇವರಿಗೆ ಕಸ ವಿಂಗಡಣೆ ಮತ್ತು ವಾರ್ಡಿನಲ್ಲಿ ಸ್ವಚ್ಛತೆಯನ್ನು ಕಾಪಾಡುವ ಬಗ್ಗೆ ತಿಳಿಸಿದರು.
- ಶ್ರೀ ಹೃದಯರಾಜ್, ವಾರ್ಡ್ ಸದಸ್ಯರು ಮಾತನಾಡುತ್ತಾ, ಪ್ರಭಾಕರ್ ಲೇಔಟ್‌ನ ರಸ್ತೆಯಲ್ಲಿ ಕೆಲವು Slabಗಳು ಹೊಡೆದು ಹೋಗಿರುವುದರಿಂದ ಅದನ್ನು ಸರಿಪಡಿಸುವಂತೆ ಹಾಗೂ ರಸ್ತೆಯಲ್ಲಿ Street lightಗಳು ಹಾಳಾಗಿರುವುದರಿಂದ ಬೆಸ್ಕಾಂ ಅಧಿಕಾರಿಗಳಿಗೆ ತಿಳಿಸಿ ಶೀಘ್ರವಾಗಿ ಸರಿಪಡಿಸುವಂತೆ ತಿಳಿಸಿದರು.
- ಶ್ರೀ. ಡೇವಿಡ್ ಫರ್ನಾಂಡಿಸ್, ವಸತಿ ಕ್ಷೇಮಾಭಿವೃದ್ಧಿ ಸಂಘ ಸದಸ್ಯರು ಮಾತನಾಡುತ್ತಾ, 8ನೇ ಕ್ರಾಸ್ ಕನಕನಗರದ ರಸ್ತೆಯು ತೀರಾ ಹಾಳಾಗಿದ್ದು, ರಸ್ತೆಯನ್ನು ಮರು ಡಾಂಬರೀಕರಣ ಮಾಡುವ ಬಗ್ಗೆ ಚರ್ಚಿಸಲಾಯಿತ್ತು. ಮತ್ತು ರಸ್ತೆಯಲ್ಲಿ Street light ಗಳನ್ನು ಹಾಳಾಗಿದ್ದು ಅದನ್ನು ಸರಿಪಡಿಸುವಂತೆ ತಿಳಿಸಿದರು.
- ಶ್ರೀ. ಉದಯ್ ಚಂದನ್, ಕೆ.ಆರ್,ಡ್ಬ್ಲ್ಯೂ,ಎ ಸದಸ್ಯರು ಮಾಡನಾಡುತ್ತಾ, 10ನೇ ಕ್ರಾಸ್ ರಸ್ತೆಯಲ್ಲಿ Furniture ಅಂಗಡಿಯಿಂದ ಸಾರ್ವಜನಿಕರಿಗೆ ತೀರಾ ತೊಂದರೆ ಉಂಟಾಗುತ್ತಿದ್ದು ಅದನ್ನು ತೆರವುಗೊಳಿಸುವಂತೆ ತಿಳಿಸಿದರು ಹಾಗೂ ರಸ್ತೆಯ dead end ಹತ್ತಿರ Street light ಗಳನ್ನು ಸರಿಪಡಿಸುವಂತೆ ತಿಳಿಸಿದರು. .
- ಶ್ರೀಮತಿ. ಪ್ರೇಮಕುಮಾರಿ, ನಾಗರೀಕರು ಮಾತನಾಡುತ್ತಾ, 20ನೇ ಕ್ರಾಸ್ ಕನಕನಗರದ ರಸ್ತೆಯಲ್ಲಿ Eletric wire ರಸ್ತೆಯಲ್ಲಿ ಹಾದುಹೋಗಿದ್ದು, ಇದರಿಂದ ಸಾರ್ವಜನಿಕರಿಗೆ ತೊಂದರೆ ಉಂಟಾಗುವ ಸಾಧ್ಯತೆ ಇರುವುದರಿಂದ ಕೂಡಲೇ ಬೆಸ್ಕಾಂ ಇಲಾಖೆ ತಿಳಿಸಿ ಅದನ್ನು ಸರಿಪಡಿಸುವಂತೆ ತಿಳಿಸಿದರು.

- ಶ್ರೀಮತಿ ಉಷಾರಾಣಿ, ಹಿರಿಯ ಆರೋಗ್ಯ ಪರಿವೀಕ್ಷಕರು ಮಾತನಾಡುತ್ತಾ, ವಾರ್ಡ್‌ನ ವ್ಯಾಪ್ತಿಯಲ್ಲಿ ಕೋವಿಡ್ ವ್ಯಾಷಿನೇಶನ್‌ಗಳನ್ನು ಜನರಿಗೆ ಅನುಕೂಲವಾಗುವಂತೆ ಹೆಚ್ಚಿನ ರೀತಿಯಲ್ಲಿ ವ್ಯಾಷಿನೇಶನ್‌ಗಳನ್ನು ಹಾಕಲಾಗುತ್ತಿದ್ದು, ಕೋವಿಡ್‌ಶೀಲ್ಡ್ ಹಾಗೂ ಕೋವಿಡ್ ಕೋವ್ಯಾಷಿನ್‌ಅನ್ನು ಸರ್ಕಾರಿ ಆಸ್ಪತ್ರೆಯಲ್ಲಿ ಬೆಳಿಗ್ಗೆ 9;00 ಗಂಟೆಯಿಂದ ಸಂಜೆ 6;00 ಗಂಟೆಯ ವರೆಗೆ 18 ವರ್ಷ ಮೇಲ್ಪಟ್ಟ ಮತ್ತು 45 ವರ್ಷ ಮೇಲ್ಪಟ್ಟ ಜನರಿಗೆ ವ್ಯಾಷೀನೇಶ್ ಅನ್ನು ನೀಡುತ್ತಿರುವ ಬಗ್ಗೆ ಸಭೆಗೆ ಹಾಜರಿದ್ದ ಸದಸ್ಯರುಗಳಿಗೆ ತಿಳಿಸಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಕೋವಿಡ್–19 ನಿಂದ ಮೃತಪಟ್ಟ ವ್ಯಕ್ತಿಗಳ ಕುಟುಂಬದವರಿಗೆ ಸರ್ಕಾರದಿಂದ ಕೋವಿಡ್ ಪರಿಹಾರ ನಿಧಿಗೆ ಸಾರ್ವಜನಿಕರು ಅರ್ಜಿಗಳನ್ನು ಸಲ್ಲಿಸುವ ಬಗ್ಗೆ ತಿಳಿಸಿದರು ಹಾಗೂ ಅದಕ್ಕೆ ಸಂಬಂಧಪಟ್ಟ ದಾಖಲಾತಿಗಳು ಮತ್ತು ಅದರ ಅನುಕೂಲತೆಗಳ ಬಗ್ಗೆ ಹಾಜರಿದ್ದ ಸದಸ್ಯರಿಗೆ ವಿವರಣೆ ನೀಡಿದರು.
- ವಾರ್ಡ್ ವ್ಯಾಪ್ತಿಯಲ್ಲಿ ಬರುವ ಎಲ್ಲ ಮುಖ್ಯರಸ್ತೆ ಮತ್ತು ಅಡ್ಡರಸ್ತೆಗಳಿಗೆ ಕಡ್ಡಾಯವಾಗಿ ಔಷಧಿ ಸಿಂಪಡಣೆ (Chemical spray)ಮಾಡಲಾಗುತ್ತಿದೆ ಎಂದು ತಿಳಿಸಿದರು.
- ಶ್ರೀ ಸುನೀಲ್, ನಾಗರೀಕರು ಮಾತನಾಡುತ್ತಾ, ಗುಡ್ಡದಹಳ್ಳಿಯಲ್ಲಿ ಮುಖ್ಯರಸ್ತೆಯ ಎಮ್.ಆರ್.ಪಿ ಅಂಗಡಿಯ ಹತ್ತಿರವಿರುವ ಚಿಕನ್ ಅಂಗಡಿಯನ್ನು ತೆರವುಗೊಳುವಂತೆ ತಿಳಿಸಿದರು ಹಾಗೂ ಎಮ್.ಆರ್.ಪಿ ಅಂಗಡಿಯ ಹಿಂಭಾಗದಲ್ಲಿ ಒಳಚರಂಡಿ ಹಾಳಾಗಿರುವುದರಿಂದ ಬಿ.ಡ್ಲ್ಯೂ.ಎಸ್.ಎಸ್,ಬಿ ಅಧಿಕಾರಿಗಳಿಗೆ ತಿಳಿಸಿ ಶೀಘ್ರವಾಗಿ ಅದನ್ನು ಸರಿಪಡಿಸುವಂತೆ ತಿಳಿಸಿದರು.

ಅಂತಿಮವಾಗಿ ಮೇಲ್ಕಂಡ ಎಲ್ಲಾ ವಿಷಯವನ್ನು ಚರ್ಚಿಸಲಾಗಿ ಹಾಗೂ ಚರ್ಚಿಸಿದ ವಿಷಯಗಳು ಬಗ್ಗೆ ಅಧಿಕಾರಿಗಳು ಮುಂದಿನ ವಾರ್ಡ್ ಸಮಿತಿ ಸಭೆಗೆ ಸಂಬಂಧಿಸಿದ ಅಧಿಕಾರಿಗಳು ಕೈಗೊಂಡಕ್ರಮದ ಬಗ್ಗೆ ವರದಿ ಪೂರ್ಣಗೊಂಡ ಭಾವಚಿತ್ರ ಹಾಗೂ ಲಿಖಿತ ವರದಿ ತಯಾರಿಸಿಕೊಂಡು ಹಾಜರಾಗಲು ಸೂಚಿಸಿ ಹಾಗೂ ಹಾಜರಾಗದೆ ಇರುವ ಅಧಿಕಾರಿಗಳು ಮುಂದಿನ ಸಭೆಯಲ್ಲಿ ಹಾಜರಾಗಿರಬೇಕೆಂದು ಸೂಚಿಸಿದರು. ಸಭೆಯನ್ನು ಅಧ್ಯಕ್ಷರ ಅಪ್ಪಣೆ ಮೇರೆಗೆ ವಾರ್ಡ್ ಸಮಿತಿ ಕಾರ್ಯದರ್ಶಿಗಳಾದ ಗುರುಸಿದ್ದಪ್ಪ .ಜಿ ರವರ ವಂದನಾರ್ಪಣೆಯೊಂದಿಗೆ ಮಧ್ಯಾಹ್ನ 12;45ಕ್ಕೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

(ಗುರುಸಿದ್ದಪ್ಪ .ಜಿ)
ವಾರ್ಡ್ ಸಮಿತಿ ಕಾರ್ಯದರ್ಶಿ
ಹಾಗೂ
ಸಹಾಯಕ ಅಭಿಯಂತರರು ವಾರ್ಡ್ ನಂ:22